**Akashvani : Bangalore**
**National Bulletin In Kannada**
**05.04.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.04.2024 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ನೂತನ ಶಿಕ್ಷಣ ನೀತಿ ಕ್ರಾಂತಿಕಾರಕ ಬದಲಾವಣೆ ತರುವ ವಿಶ್ವಾಸ- ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್**

**೨. ಆರ್‌ಬಿಐ ಹಣಕಾಸು ನೀತಿ; ರೆಪೊ ದರದಲ್ಲಿ ಯಥಾಸ್ಥಿತಿ**

**೩. ಮದರಸ ಮಂಡಳಿ ಶಿಕ್ಷಣ ಕಾಯ್ದೆ ಕುರಿತ ಅಲಹಾಬಾದ್ ಹೈಕೋರ್ಟ್ ತೀರ್ಪಿಗೆ ಸುಪ್ರೀಂಕೋರ್ಟ್ ತಡೆಯಾಜ್ಞೆ**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಸನ್ ರೈಸರ್ಸ್ ಹೈದರಾಬಾದ್ -ಚೆನ್ನೈ ಸೂಪರ್ ಕಿಂಗ್ಸ್ ಹಣಾಹಣಿ**

**<><*<><>*><>**

ಸುಮಾರು ಮೂರು ದಶಕಗಳ ನಂತರ ದೇಶದಲ್ಲಿ ಜಾರಿಯಾಗಿರುವ ನೂತನ ಶಿಕ್ಷಣ ನೀತಿ ಶೈಕ್ಷಣಿಕ ವ್ಯವಸ್ಥೆಯಲ್ಲಿ ಕ್ರಾಂತಿಕಾರಕ ಬದಲಾವಣೆ ತರುವ ವಿಶ್ವಾಸವಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಉತ್ತರಾಖಂಡ್‌ನ ಮಸೂರಿಯ ಲಾಲ್‌ಬಹದ್ದೂರ್ ಶಾಸ್ತ್ರಿ ರಾಷ್ಟ್ರೀಯ ಆಡಳಿತ ತರಬೇತಿ ಸಂಸ್ಥೆಯಲ್ಲಿಂದು ೨೦೨೩ನೇ ಸಾಲಿನ ಭಾರತೀಯ ಆಡಳಿತ ಸೇವೆಯ ಅಧಿಕಾರಿಗಳ ತರಬೇತಿ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡ ಅವರು, ನಮ್ಮ ಕನಸುಗಳ ಸಾಕಾರ, ಚಿಂತನಕ್ರಮ ಹಾಗೂ ಅಗತ್ಯತೆಗಳಿಗೆ ಅನುಗುಣವಾಗಿ ನೂತನ ಶಿಕ್ಷಣ ನೀತಿ ರಚಿಸಲಾಗಿದೆ ಎಂದರು. ಯುವ ಅಧಿಕಾರಿಗಳು, ಉತ್ಕೃಷ್ಟತೆ, ಸಮಗ್ರತೆ ಹಾಗೂ ಬದ್ಧತೆಯ ಮೂಲಕ ದೇಶದ ಅಭಿವೃದ್ಧಿಗೆ ಅವರು ಕರೆ ನೀಡಿದರು. ರಾಷ್ಟ್ರದ ಉಜ್ವಲ ಭವಿಷ್ಯ ರೂಪಗೊಳಿಸಲು ಸೇವೆ ಸಲ್ಲಿಸಬೇಕು ಎಂದು ಮನವಿ ಮಾಡಿದರು.

**<><*<><>*><>**

ಭಾರತೀಯ ರಿಸರ್ವ್ ಬ್ಯಾಂಕ್ ನ ಹಣಕಾಸು ನೀತಿ ಸಮಿತಿಯು ಸತತ ೭ನೇ ಬಾರಿಗೆ ರೆಪೊ ದರವನ್ನು ಯಥಾಸ್ಥಿತಿಯಲ್ಲಿ ಕಾಯ್ದುಕೊಂಡಿದೆ. ಆರ್ ಬಿಐ ಗವರ್ನರ್ ಶಕ್ತಿಕಾಂತ್ ದಾಸ್, ಇಂದು ಹಣಕಾಸು ನೀತಿ ಸಮಿತಿಯ ನಿರ್ಧಾರವನ್ನು ಪ್ರಕಟಿಸಿದ್ದು, ರೆಪೊ ದರವನ್ನು ಶೇಕಡ ೬.೫ರಲ್ಲಿ ಉಳಿಸಿಕೊಂಡಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ನೈಜ ಜಿಡಿಪಿ ದರವು ಶೇಕಡ ೭ ರಷ್ಟಿದ್ದರೆ, ಸಿಪಿಐ ಹಣದುಬ್ಬರವು ಶೇಕಡ ೪.೫ ರಷ್ಟಿದೆ ಎಂದು ಅವರು ಹೇಳಿದರು. ೨೦೨೪ರ ಮಾರ್ಚ್ ೨೯ರ ವೇಳೆಗೆ ಭಾರತದ ವಿದೇಶಿ ವಿನಿಮಯ ಮೀಸಲು ಸಾರ್ವಕಾಲಿಕ ಗರಿಷ್ಠ ೬೪೫.೬ ಶತಕೋಟಿ ಡಾಲರ್ ತಲುಪಿದೆ. ಜಾಗತಿಕ ವ್ಯಾಪಾರವು ೨೦೨೪ ರಲ್ಲಿ ಸುಧಾರಿಸುವ ನಿರೀಕ್ಷೆಯಿದೆ ಆದರೆ ಸರಾಸರಿಗಿಂತ ಕಡಿಮೆ ಇರುತ್ತದೆ ಎಂದು ಶಕ್ತಿಕಾಂತ್ ದಾಸ್‌ಅಂದಾಜಿಸಿದ್ದಾರೆ.

**<><*<><>*><>**

ಉತ್ತರ ಪ್ರದೇಶದ ಮದರಸ ಮಂಡಳಿಯ ಶಿಕ್ಷಣ ಕಾಯ್ದೆ-೨೦೦೪ ಅನ್ನು ಅಸಂವಿಧಾನಿಕ ಹಾಗೂ ಜಾತ್ಯಾತೀತತೆಯ ಉಲ್ಲಂಘನೆ ಎಂದು ಹೇಳಿದ್ದ ಅಲಹಾಬಾದ್ ಹೈಕೋರ್ಟ್ ತೀರ್ಪಿಗೆ ಸುಪ್ರೀಂಕೋರ್ಟ್ ಇಂದು ತಡೆಯಾಜ್ಞೆ ನೀಡಿದೆ. ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ಮೂವರು ಸದಸ್ಯರ ನ್ಯಾಯಪೀಠ, ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ಸಂಬಂಧ ಕೇಂದ್ರ ಸರ್ಕಾರ ಹಾಗೂ ಉತ್ತರ ಪ್ರದೇಶ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ. ಇದಕ್ಕೂ ಮೊದಲು ಕೇಂದ್ರ ಸರ್ಕಾರ ತನ್ನ ಮನವಿಯಲ್ಲಿ, ಹೈಕೋರ್ಟ್ ತೀರ್ಪು ಭಾರತೀಯ ಸಂವಿಧಾನದಲ್ಲಿ ಪ್ರತಿಪಾದಿಸಿರುವ ಜಾತ್ಯಾತೀತತೆಯ ಪರಿಕಲ್ಪನೆಯನ್ನು ತಪ್ಪಾಗಿ ವ್ಯಾಖ್ಯಾನಿಸಿರಬಹುದು ಎಂದು ಪ್ರತಿಪಾದಿಸಿತು.

**<><*<><>*><>**

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿಯು ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ಕ್ಕೆ ಅನುಗುಣವಾಗಿ ಮೌಲ್ಯಮಾಪನ ಮತ್ತು ಮೌಲ್ಯಮಾಪನದಲ್ಲಿ ಬದಲಾವಣೆಗಳನ್ನು ಪರಿಚಯಿಸಿದೆ. ಹೊಸ ಸ್ವರೂಪವು ಈಗ ಹೆಚ್ಚು ಸಾಮರ್ಥ್ಯ ಆಧಾರಿತ ಪ್ರಶ್ನೆಗಳು ಮತ್ತು ಕಡಿಮೆ ನಿರ್ಮಿತ ಪ್ರತಿಕ್ರಿಯೆ ಪ್ರಶ್ನೆಗಳನ್ನು ಆಧರಿಸಿಸುತ್ತದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ, ೧೧ ಮತ್ತು ೧೨ ನೇ ತರಗತಿಯಲ್ಲಿ ಬಹು ಆಯ್ಕೆ ಪ್ರಶ್ನೆಗಳು ಅಥವಾ ಪ್ರಕರಣ ಆಧಾರಿತ ಪ್ರಶ್ನೆಗಳು, ಮೂಲ ಆಧಾರಿತ ಸಂಯೋಜಿತ ಪ್ರಶ್ನೆಗಳು ಅಥವಾ ಇತರ ಯಾವುದೇ ರೀತಿಯ ಸಾಮರ್ಥ್ಯ ಕೇಂದ್ರಿತ ಪ್ರಶ್ನೆಗಳನ್ನು ಶೇಕಡಾ ೪೦ ರಿಂದ ೫೦ ಕ್ಕೆ ಹೆಚ್ಚಿಸಲಾಗಿದೆ. ಮತ್ತೊಂದೆಡೆ, ಅಸ್ತಿತ್ವದಲ್ಲಿರುವ ಮಾದರಿಗೆ ಅನುಗುಣವಾಗಿ ಕಿರು ಉತ್ತರ ಪ್ರಶ್ನೆಗಳು ಮತ್ತು ದೀರ್ಘ ಉತ್ತರ ಪ್ರಕಾರದ ಪ್ರಶ್ನೆಗಳು ಸೇರಿದಂತೆ ನಿರ್ಮಿತ ಪ್ರತಿಕ್ರಿಯೆ ಪ್ರಶ್ನೆಗಳನ್ನು ೨೦೨೪-೨೫ರ ಶೈಕ್ಷಣಿಕ ಅಧಿವೇಶನಗಳಲ್ಲಿ ಶೇಕಡಾ ೪೦ ರಿಂದ ೩೦ ಕ್ಕೆ ತಗ್ಗಿಸಲಾಗಿದೆ. ಆದಾಗ್ಯೂ, ೨೦೨೪-೨೫ರ ಹೊಸ ಶೈಕ್ಷಣಿಕ ಅಧಿವೇಶನಕ್ಕಾಗಿ ೯ ಮತ್ತು ೧೦ ನೇ ತರಗತಿಗಳ ವರ್ಷಾಂತ್ಯದ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳ ಸಂಯೋಜನೆಯಲ್ಲಿ ಯಾವುದೇ ಬದಲಾವಣೆಗಳನ್ನು ಮಾಡಲಾಗಿಲ್ಲ.

**<><*<><>*><>**

ಪ್ರಸಕ್ತ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ, ಕಾಂಗ್ರೆಸ್ ಬಹುನಿರೀಕ್ಷಿತ ಚುನಾವಣಾ ಪ್ರಣಾಳಿಕೆ ಬಿಡುಗಡೆಗೊಳಿಸಿದೆ. ಪ್ರಣಾಳಿಕೆ ಕುರಿತು ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, "ನಮ್ಮ ಈ ಪ್ರಣಾಳಿಕೆಯು ದೇಶದ ರಾಜಕೀಯ ಇತಿಹಾಸದಲ್ಲಿ 'ನ್ಯಾಯ್ ಕಾ ದಸ್ತಾವೇಜ್' ಆಗಿಯೂ ನೆನಪಿನಲ್ಲಿ ಉಳಿಯುತ್ತದೆ" ಎಂದು ತಿಳಿಸಿದ್ದಾರೆ. ವಿದ್ಯುನ್ಮಾನ ಮತಯಂತ್ರ ಇವಿಎಂ ದಕ್ಷತೆ ಹಾಗೂ ಬ್ಯಾಲೆಟ್ ಪೇಪರ್‌ನಲ್ಲಿ ಪಾರದರ್ಶಕತೆ ತರಲು ಚುನಾವಣಾ ಕಾನೂನುಗಳಿಗೆ ತಿದ್ದುಪಡಿ ಮಾಡುತ್ತೇವೆ ಎಂದು ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಭರವಸೆ ನೀಡಿದೆ. ಮತದಾನವು ಇವಿಎಂ ಮೂಲಕವೇ ನಡೆಯುತ್ತದೆ ಆದರೆ, ಮತದಾರನು ಯಂತ್ರ - ರಚಿತ ಮತದಾನದ ಚೀಟಿಯನ್ನು ಮತದಾರ ಪರಿಶೀಲಿಸಬಹುದಾಗಿರುವಂತೆ ರೂಪಿಸಲಾಗುತ್ತದೆ ಎಂದು ಭರವಸೆ ನೀಡಿದ್ದಾರೆ. ನ್ಯಾಯ ಪತ್ರ ಹೆಸರಿನ ಈ ಪ್ರಣಾಳಿಕೆ ಯುವ ನ್ಯಾಯ, ಕಿಸಾನ್ ನ್ಯಾಯ, ನಾರಿ ನ್ಯಾಯ, ಶ್ರಮಿಕ ನ್ಯಾಯ, ಹಿಸ್ಸೇದಾರಿ ನ್ಯಾಯವನ್ನು ಒಳಗೊಂಡಿದೆ ಎಂದು ವಿವರಿಸಿದರು. ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೋಡೋ ಯಾತ್ರೆಯಲ್ಲಿ ಘೋಷಿಸಲಾದ ನ್ಯಾಯಗಳನ್ನು ಒದಗಿಸಲು ಕಾಂಗ್ರೆಸ್ ಪಕ್ಷ ಬದ್ಧವಾಗಿದ್ದು, ೨೫ ಗ್ಯಾರಂಟಿಗಳನ್ನು ಘೋಷಿಸಲಾಗಿದೆ. ಇದರಲ್ಲಿ ಎಲ್ಲ ವರ್ಗದವರಿಗೂ ಪ್ರಯೋಜನ ಒದಗಿಸಲಾಗಿದೆ ಎಂದು ಖರ್ಗೆ ತಿಳಿಸಿದರು. ಯುವ ನ್ಯಾಯ ಭರವಸೆ ಅಡಿಯಲ್ಲಿ ಪ್ರತಿ ಶಿಕ್ಷಿತ ಯುವಜನರಿಗೆ ಪ್ರಶಿಕ್ಷಣ ತರಬೇತಿ ಜೊತೆಗೆ ಉದ್ಯೋಗದ ಗ್ಯಾರಂಟಿ ನೀಡಲಾಗುವುದು ಎಂದರು. ಪಕ್ಷದ ಹಿರಿಯ ನಾಯಕ, ಮಾಜಿ ಕೇಂದ್ರ ಸಚಿವ ಪಿ.ಚಿದಂಬರಂ ಮಾತನಾಡಿ, ಯುಪಿಎ ಸರ್ಕಾರದ ಅವಧಿಯಲ್ಲಿ ದೇಶದ ಅಭಿವೃದ್ಧಿ ದರ

ಶೇಕಡ ೭.೫ರಷ್ಟಿತ್ತು. ಆದರೆ ಕಳೆದ ೧೦ ವರ್ಷಗಳಲ್ಲಿ ಸರಾಸರಿ ಅಭಿವೃದ್ಧಿ ದರ ಕೇವಲ ಶೇಕಡ ೫.೮ರಷ್ಟಿದೆ ಎಂದರು. ಎನ್ ಡಿ ಎ ಅವಧಿಯಲ್ಲಿ ತಳ ಸಮುದಾಯದವರು ಸೇರಿದಂತೆ ಎಲ್ಲ ವರ್ಗಗಳಿಗೆ ಯಾವುದೇ ಪ್ರಯೋಜನ ದೊರಕಿಲ್ಲ ಎಂದರು. ಹಿರಿಯ ನಾಯಕಿ ಸೋನಿಯಾ ಗಾಂಧಿ, ಸಂಸದ ರಾಹುಲ್ ಗಾಂಧಿ ಸೇರಿದಂತೆ ಪಕ್ಷದ ಹಿರಿಯ ನಾಯಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಇಂದು ಪ್ರಕಟಿಸಿರುವ ಪ್ರಣಾಳಿಕೆಯನ್ನು ಸುಳ್ಳಿನ ಕಂತೆ ಎಂದು ಬಿಜೆಪಿ ಬಣ್ಣಿಸಿದೆ. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ, ಪಕ್ಷದ ವಕ್ತಾರ ಸುಧಾಂಶು ತ್ರಿವೇದಿ, ಮತದಾರರಲ್ಲಿ ಗೊಂದಲ ಸೃಷ್ಟಿಯಾಗುವಂತೆ ಪ್ರಣಾಳಿಕೆ ಸಿದ್ಧಪಡಿಸಲಾಗಿದೆ ಎಂದು ಆರೋಪಿಸಿದರು. ವಿಧಾನಸಭೆ ಹಾಗೂ ಹಿಂದಿನ ಲೋಕಸಭೆ ಚುನಾವಣೆಯ ಸಂದರ್ಭದಲ್ಲಿ ಘೋಷಿಸಿದ್ದ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ್ದ ಯಾವುದೇ ಭರವಸೆಗಳನ್ನು ಕಾಂಗ್ರೆಸ್ ಈಡೇರಿಸಿಲ್ಲ ಎಂದು ಆರೋಪಿಸಿದರು. ನೀರು ನಿರ್ವಹಣೆ ಪುಟದಲ್ಲಿ ನ್ಯೂಯಾರ್ಕ್ ರಾಜ್ಯದ ಬಫಲೋ ನದಿಯ ಚಿತ್ರವನ್ನು ಬಳಸಿದೆ ಎಂದು ವ್ಯಂಗ್ಯವಾಡಿದೆ. ಕಾಂಗ್ರೆಸ್ ದೇಶಕ್ಕೆ ಅನ್ಯಾಯ ಮಾಡಿದೆ ಎಂದು ಆರೋಪಿಸಿರುವ ಬಿಜೆಪಿ ವಕ್ತಾರರು, ಪ್ರಣಾಳಿಕೆ ದಾಖಲೆಯನ್ನು ನ್ಯಾಯ ಪತ್ರ ಎಂದು ಹೆಸರಿಸಿರುವುದಕ್ಕೆ ವಕ್ತಾರರು ವ್ಯಂಗ್ಯವಾಡಿದ್ದಾರೆ.

<><*<><>*><>

ರಾಜಸ್ತಾನದ ಚುರುವಿನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಬಿಜೆಪಿ ಅಭ್ಯರ್ಥಿಗಳ ಪರ ರೋಡ್ ಶೋ ನಡೆಸಿದರು. ಬಳಿಕ ನಡೆದ ಬೃಹತ್ ಜನಸಭೆ ಉದ್ದೇಶಿಸಿ ಮಾತನಾಡಿದ ಪ್ರಧಾನಿ, ಕಳೆದ ಹತ್ತು ವರ್ಷಗಳಲ್ಲಿ ಕ್ಷಿಪ್ರಗತಿಯಲ್ಲಿ ದೇಶದ ಅಭಿವೃದ್ಧಿಯಾಗಿದ್ದು, ಜನರ ಜೀವನಮಟ್ಟದಲ್ಲಿ ಹೆಚ್ಚಿನ ಸುಧಾರಣೆಯಾಗಿದೆ ಎಂದರು. ಬಡವರಿಗೆ ಗುಣಮಟ್ಟದ ಮನೆಗಳನ್ನು ಒದಗಿಸಲಾಗಿದ್ದು, ಜಲಜೀವನ ಮಿಷನ್ ಯೋಜನೆಯಡಿ ಕೊಳವೆ ಮೂಲಕ ಶುದ್ಧ ಕುಡಿಯುವ ನೀರು ಪೂರೈಸಲಾಗುತ್ತಿದೆ ಎಂದರು. ತಮಗೆ ಯಾವುದೇ ಕುಟುಂಬವಿಲ್ಲ ಎಂದು ಕೆಲವರು ಆರೋಪಿಸುತ್ತಾರೆ. ಆದರೆ ಇಡೀ ಭಾರತವೇ ತಮ್ಮ ಕುಟುಂಬ ಎಂದು ಪ್ರಧಾನಿ ಹೇಳಿದರು.

<><*<><>*><>

ತಮ್ಮ ವಕೀಲರೊಂದಿಗಿನ ಕಾನೂನು ಸಭೆಗಳ ಸಂಖ್ಯೆಯನ್ನು ವಾರಕ್ಕೆ ೨ ರಿಂದ ೫ ಬಾರಿಗೆ ಹೆಚ್ಚಿಸುವಂತೆ ಆದೇಶ ನೀಡಬೇಕೆಂದು ಕೋರಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಲ್ಲಿಸಿರುವ ಅರ್ಜಿ ಸಂಬಂಧ ದೆಹಲಿಯ ನ್ಯಾಯಾಲಯ ತನ್ನ ಆದೇಶವನ್ನು ಕಾಯ್ದಿರಿಸಿದೆ. ರೋಸ್ ಅವೆನ್ಯೂ ನ್ಯಾಯಾಲಯದ ವಿಶೇಷ ನ್ಯಾಯಾಧೀಶೆ ಕಾವೇರಿ ಭವೇಜಾ ಅವರು, ಏಪ್ರಿಲ್ ೯ ರಂದು ತಮ್ಮ ಆದೇಶವನ್ನು ಹೊರಡಿಸಲು ಸಾಧ್ಯವಾಗುವಂತೆ ಪ್ರಕರಣವನ್ನು ನಿಗದಿಪಡಿಸಿದ್ದಾರೆ. ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಕಳೆದ ಸೋಮವಾರ, ನ್ಯಾಯಾಲಯ ಅರವಿಂದ್ ಕೇಜ್ರಿವಾಲ್ ಅವರನ್ನು ಏಪ್ರಿಲ್ ೧೫ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತ್ತು.

<><*<><>*><>

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಪಿತೂರಿಯಡಿ ಬಂಧಿಸಲಾಗಿದೆ ಎಂದು ಆಮ್ ಆದ್ಮಿ ಪಕ್ಷ ಆರೋಪಿಸಿದೆ. ನವದೆಹಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಪಕ್ಷದ ನಾಯಕ ಸಂಜಯ್ ಸಿಂಗ್,

ಕೇಜ್ರಿವಾಲ್ ವಿರುದ್ಧ ಸುಳ್ಳು ಹೇಳಿಕೆ ನೀಡುವಂತೆ ಸಂಸದ ಮಾಗುಂಟ ರೆಡ್ಡಿ ಅವರ ಮೇಲೆ ಒತ್ತಡ ಏರಲಾಗಿತ್ತು. ಆದರೆ ಅವರು ನಿರಾಕರಿಸಿದ್ದಾಗ, ಅವರ ಪುತ್ರ ರಾಘವ ರೆಡ್ಡಿ ಅವರನ್ನು ಬಂಧಿಸಲಾಯಿತು ಎಂದು ಆರೋಪಿಸಿದ್ದಾರೆ. ನಿರಂತರ ವಿಚಾರಣೆಯ ನಂತರ ರಾಘವ ರೆಡ್ಡಿ ಅವರು, ಅರವಿಂದ್ ಕೇಜ್ರಿವಾಲ್ ವಿರುದ್ಧ ಹೇಳಿಕೆಯನ್ನು ಬದಲಾಯಿಸಿದರು. ಎಎಪಿ ನಾಯಕರ ಬಂಧನ ದೊಡ್ಡ ಪಿತೂರಿಯ ಭಾಗವಾಗಿದೆ ಎಂದು ಅವರು ದೂರಿದ್ದಾರೆ.

**<><*<><>*><>**

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ತಿಹಾರ್ ಜೈಲಿನಲ್ಲಿರುವ ತೆಲಂಗಾಣದ ಬಿಆರ್‌ಎಸ್ ನಾಯಕಿ ಕೆ.ಕವಿತಾ ಅವರನ್ನು ವಿಚಾರಣೆ ನಡೆಸಿ, ಹೇಳಿಕೆ ದಾಖಲಿಸಿಕೊಳ್ಳಲು ಕೇಂದ್ರೀಯ ತನಿಖಾ ಸಂಸ್ಥೆ-ಸಿಬಿಐಗೆ ದೆಹಲಿ ನ್ಯಾಯಾಲಯ ಇಂದು ಒಪ್ಪಿಗೆ ನೀಡಿದೆ. ಕವಿತಾ ಅವರನ್ನು ವಿಚಾರಣೆಗೊಳಪಡಿಸಲು ಅನುಮತಿ ಕೋರಿ ಸಿಬಿಐ ಸಲ್ಲಿಸಿದ್ದ ಮನವಿಯ ಮೇರೆಗೆ ನ್ಯಾಯಾಲಯ ಈ ಆದೇಶ ನೀಡಿದೆ. ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ, ಮಾರ್ಚ್ ೧೫ರಂದು ಜಾರಿ ನಿರ್ದೇಶನಾಲಯ ಕವಿತಾ ಅವರನ್ನು ಬಂಧಿಸಿತ್ತು. ಪ್ರಸ್ತುತ ಅವರನ್ನು ತಿಹಾರ್ ಜೈಲಿನಲ್ಲಿ ಇರಿಸಲಾಗಿದೆ.

**<><*<><>*><>**

ಲೋಕಸಭಾ ಸಾರ್ವತ್ರಿಕ ಚುನಾವಣೆ ಎರಡನೇ ಹಂತಕ್ಕೆ ಇದೇ ೧೨ ರಿಂದ ನಾಮಪತ್ರ ಸಲ್ಲಿಕೆ ಕಾರ್ಯ ಆರಂಭಗೊಳ್ಳಲಿದೆ. ರಾಜಕೀಯ ಪಕ್ಷಗಳು ಮತ್ತು ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳು ತಮ್ಮ ನಾಮಪತ್ರಗಳು ತಿರಸ್ಕಾರವಾಗದಂತೆ, ಎಚ್ಚರಿಕೆಯಿಂದ ಅರ್ಜಿಯನ್ನು ಭರ್ತಿ ಮಾಡುವಂತೆ ಮತ್ತು ಈ ಕುರಿತಂತೆ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯ ನೆರವು ಪಡೆಯುವಂತೆ ಉತ್ತರಕನ್ನಡ ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ ಹೇಳಿದ್ದಾರೆ.

**<><*<><>*><>**

ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಸನ್ ರೈಸರ್ಸ್ ಹೈದರಾಬಾದ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಉಭಯ ತಂಡಗಳು ತಮ್ಮ ಹಿಂದಿನ ಪಂದ್ಯಗಳಲ್ಲಿ ಸೋತಿದ್ದು, ಗೆಲುವಿನ ಹುಡುಕಾಟದಲ್ಲಿವೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ <>*><>**